# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM-180/2009/ARE-5, ದಿನಾಂಕ:07.01.2017
2) ಸರ್ಕಾರದ ಸಮಸಂಖ್ಯೆಯ ಪತ್ರ, ದಿನಾಂಕ 13.01.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 05.01.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಸಂತೋಷಕುಮಾರ ಪರಸಪ್ಪ ತಳಕೇರಿ, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು 1) ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ, 2) ಶ್ರೀ ಸಿದ್ಧಪ್ಪ ಪೂಜಾರಿ(ಶ್ರೀಮಂತ ಪೂಜಾರಿ), ಅಧ್ಯಕ್ಷರು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ (ಇನ್ನು ಮುಂದೆ 'ಎದುರುದಾರರು 1 ಮತ್ತು 2' ಎಂದು ಕರೆಯಲ್ಪಡುತ್ತಾರೆ) ಇವರುಗಳ ವಿರುದ್ಧ ದೂರು ನೀಡಿ, 2008-09 ನೇ ಸಾಲಿನ ಇಂದಿರಾ ಆವಾಜ್ ಮತ್ತು ಆಶ್ರಯ ವಸತಿ ಯೋಜನೆ ಅಡಿಯಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರ ಪತಿ/ಪತ್ನಿಯ ಹೆಸರಿಗೆ ಹಾಗೂ ಗ್ರಾಮ ಪಂಚಾಯತಿ ಸದಸ್ಯರ ಹೆಸರಿಗೆ ಮನೆಯನ್ನು ಮಂಜೂರು ಮಾಡಿದ್ದು ಹಾಗೂ 2008-09 ನೇ ಸಾಲಿನಲ್ಲಿ 150 ಶೌಚಾಲಯ ನಿರ್ಮಾಣದಲ್ಲಿ ಹಣ ದುರುಪಯೋಗ ಮಾಡಿರುತ್ತಾರೆಂದು ಲೋಕಾಯುಕ್ತ ಸಂಸ್ಥೆಗೆ ದೂರು ನೀಡಿರುತ್ತಾರೆ.

ಈ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಹಾಗೂ ಪ್ರಕರಣದಲ್ಲಿ ಭಾಗಿಯಾಗಿರುವ 2) ಶ್ರೀ ಸಿದ್ಧಪ್ಪ ಪೂಜಾರಿ(ಶ್ರೀಮಂತ ಪೂಜಾರಿ), ಅಧ್ಯಕ್ಷರು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ, 3) ಶ್ರೀ ಸುರೇಶ್ ರೇವಪ್ಪ ರೂಗಿ, ಹಿಂದಿನ ಅಧ್ಯಕ್ಷರು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಮತ್ತು 4) ಶ್ರೀ ಎಫ್.ಸಿ.ಮೋಸಲಗಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳಿಂದ ಪ್ರಕರಣದಲ್ಲಿ ದುರುಪಯೋಗವಾದ ಮೊತ್ತವನ್ನು ವಸೂಲಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಲೋಕಾಯುಕ್ತ ವರದಿಯ ಶಿಫಾರಸ್ಸಿನಂತೆ, ಪ್ರಕರಣದಲ್ಲಿ ಭಾಗಿಯಾಗಿರುವ 2) ಶ್ರೀ ಸಿದ್ಧಪ್ಪ ಪೂಜಾರಿ(ಶ್ರೀಮಂತ ಪೂಜಾರಿ), ಅಧ್ಯಕ್ಷರು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ, 3) ಶ್ರೀ ಸುರೇಶ್ ರೇವಪ್ಪ ರೂಗಿ, ಹಿಂದಿನ ಅಧ್ಯಕ್ಷರು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಮತ್ತು 4) ಶ್ರೀ ಎಫ್.ಸಿ.ಮೋಸಲಗಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳಿಂದ ಪ್ರಕರಣದಲ್ಲಿ ದುರುಪಯೋಗವಾದ ಮೊತ್ತವನ್ನು ವಸೂಲಿ ಮಾಡಲು ಸಕ್ಷಮ ಅಧಿಕಾರಿಯಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ ಇವರಿಗೆ ಮೇಲೆ ಓದಲಾದ (2) ರಲ್ಲಿ ನಿರ್ದೇಶನ ನೀಡಲಾಗಿದೆ.

ಹಾಗೂ ಎದುರುದಾರರಾದ ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರು ದಿನಾಂಕ 31.05.2014 ರಂದು ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ ಸದರಿಯವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1957ರ ನಿಯಮ 214(2)(ಬಿ) ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 39 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 21.01.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214 ರಡಿ ಸರ್ಕಾರವು ಮಂಜೂರಾತಿ ನೀಡಿರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ನಿಯಮ–214 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   (ಮೇಲೆ ಓದಲಾದ (1) ರಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
5) ಕಾರ್ಯನಿರ್ವಾಹಕ ಅಧಿಕಾರಿ, ಇಂಡಿ ತಾಲ್ಲೂಕು ಪಂಚಾಯತಿ, ಇಂಡಿ, ವಿಜಯಪುರ ಜಿಲ್ಲೆ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ಗುನ್ನು ಪೂಜಾರಿ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು, ಹೊರ್ತಿ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.